**All India Radio: Bangalore**
**National Bulletin In Kannada**
**13.04.2026 07.35 a.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**13.04.2026 07.35 a.m.**
**<><><><>**

ಮುಖ್ಯಾಂಶಗಳು

1. ನವದೆಹಲಿಯಲ್ಲಿಂದು ನಾರೀಶಕ್ತಿ ವಂದನಾ ಸಮ್ಮೇಳನ - ಪ್ರಧಾನಿ ನರೇಂದ್ರ ಮೋದಿ ಭಾಗಿ
2. ಯುಎಇ ಅಧ್ಯಕ್ಷರೊಂದಿಗೆ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಇಂಧನ ಸಹಕಾರ ಬಲವರ್ಧನೆ ಕುರಿತಂತೆ ಚರ್ಚೆ
3. ಹಾರ್ಮುಜ್ ಜಲಸಂಧಿಯಲ್ಲಿ ಅಮೆರಿಕ ಮಿಲಿಟರಿ ಪಡೆ ಕಡಲ ದಿಗ್ಬಂಧನ - ಪ್ರತಿಕಾರದ ಎಚ್ಚರಿಕೆ ನೀಡಿದ ಇರಾನ್
4. ಮುಂಬೈನಲ್ಲಿ ಇಂದು ಸಂಜೆ ಸರ್ಕಾರಿ ಗೌರವದೊಂದಿಗೆ ಸಂಗೀತ ದಿಗ್ಗಜೆ ಆಶಾ ಭೋಸ್ಲೆ ಅಂತ್ಯಕ್ರಿಯೆ
5. ಐಪಿಎಲ್ ಟಿ-೨೦ ಕ್ರಿಕೆಟ್ : ಮುಂಬೈ ಇಂಡಿಯನ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರಿಗೆ ೧೮ರನ್ ಜಯ

<><><><>

ನವದೆಹಲಿಯಲ್ಲಿಂದು ನಡೆಯಲಿರುವ ನಾರಿ ಶಕ್ತಿ ವಂದನ ಸಮ್ಮೇಳನದಲ್ಲಿ ಪ್ರಧಾನಿ ನರೇಂದ್ರ ಮೋದಿ ದೇಶವನ್ನುದ್ದೇಶಿಸಿ ಮಾತನಾಡಲಿದ್ದಾರೆ. ಭಾರತದ ಅಭಿವೃದ್ಧಿ ಪಥವನ್ನು ರೂಪಿಸುವಲ್ಲಿ, ಮಹಿಳೆಯರ ಹೆಚ್ಚಿನ ಭಾಗವಹಿಸುವಿಕೆಯ ಬದ್ಧತೆಯನ್ನು ಬಲಪಡಿಸಲು ಈ ರಾಷ್ಟ್ರೀಯ ಮಟ್ಟದ ಸಮ್ಮೇಳನವನ್ನು ಆಯೋಜಿಸಲಾಗುತ್ತಿದೆ. ಪಂಚಾಯತ್‌ಗಳಿಂದ, ಸಂಸತ್ತಿನವರೆಗೆ ಎಲ್ಲಾ ಹಂತಗಳಲ್ಲಿ ಆಡಳಿತ ಮತ್ತು ನಾಯಕತ್ವದಲ್ಲಿ ಹೆಚ್ಚುತ್ತಿರುವ ಮಹಿಳೆಯರ ಪಾತ್ರವನ್ನು ಇದು ಪ್ರತಿಬಿಂಬಿಸುತ್ತದೆ. ನಿರ್ಧಾರ ತೆಗೆದುಕೊಳ್ಳುವ ಪ್ರಕ್ರಿಯೆಗಳಲ್ಲಿ ಮಹಿಳೆಯರ ಪ್ರಾತಿನಿಧ್ಯದ ಮಹತ್ವವನ್ನು ಈ ಕಾರ್ಯಕ್ರಮ ಸಾರಲಿದೆ. ಶೈಕ್ಷಣಿಕ, ವಿಜ್ಞಾನ, ಕ್ರೀಡೆ, ಉದ್ಯಮಶೀಲತೆ, ಮಾಧ್ಯಮ, ಸಾಮಾಜಿಕ ಕಾರ್ಯ ಮತ್ತು ಸಂಸ್ಕೃತಿಯಂತಹ ವಿವಿಧ ಕ್ಷೇತ್ರಗಳ ಪ್ರತಿನಿಧಿಗಳೊಂದಿಗೆ, ವಿವಿಧ ಕ್ಷೇತ್ರಗಳ ಮಹಿಳಾ ಸಾಧಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ೨೦೪೭ ರ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಭಾರತದ ಪ್ರಯಾಣದಲ್ಲಿ ಮಹಿಳೆಯರ ಪಾತ್ರವನ್ನು ಸಮ್ಮೇಳನ ಪ್ರತಿಪಾದಿಸಲಿದೆ. ಸೆಪ್ಟೆಂಬರ್ ೨೦೨೩ ರಲ್ಲಿ, ಶಾಸಕಾಂಗ ಸಂಸ್ಥೆಗಳಲ್ಲಿ, ಮಹಿಳಾ ಪ್ರಾತಿನಿಧ್ಯ ಹೆಚ್ಚಿಸಲು, ಸಂಸತ್ತು 'ನಾರಿ ಶಕ್ತಿ ವಂದನ ಅಧಿನಿಯಮ್' ಅನ್ನು ಅಂಗೀಕರಿಸಿತು. ಲೋಕಸಭೆ ಮತ್ತು ರಾಜ್ಯ ಶಾಸಕಾಂಗ ಸಭೆಗಳಲ್ಲಿ ಮಹಿಳೆಯರಿಗೆ ಮೂರನೇ ಒಂದು ಭಾಗದಷ್ಟು ಸ್ಥಾನಗಳನ್ನು ಕಾಯ್ದಿರಿಸಲು, ಈ ಕಾಯ್ದೆ ಅವಕಾಶ ನೀಡಿದೆ. ದೇಶಾದ್ಯಂತ ಮಹಿಳಾ ಮೀಸಲಾತಿ ಅನುಷ್ಠಾನವನ್ನು ಕೇಂದ್ರೀಕರಿಸಿ, ಇದೇ ೧೬ ರಿಂದ ಸಂಸತ್ತಿನ ಅಧಿವೇಶನ ನಡೆಸಲು ಕೇಂದ್ರ ಸರ್ಕಾರ ತೀರ್ಮಾನಿಸಿದೆ.

<><><><>

ಭಾರತದ ಮಹಿಳೆಯರಿಗೆ ನೀಡುವ ಭರವಸೆಗಳು ರಾಜಕೀಯ ದಾಳವಾಗಲು ಸಾಧ್ಯವಿಲ್ಲ ಎಂದು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಸಚಿವರು, ಇಂದು ನಾರಿ ಶಕ್ತಿಗೆ ಬಲ ತುಂಬುವ ಸಮಯ ಬಂದಾಗ, ಹಿಂಜರಿಕೆ ಮತ್ತು ಪ್ರಶ್ನೆಗಳು ಏಳುತ್ತಿವೆ ಎಂದು ಪ್ರತಿಪಕ್ಷದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಈ ಸಂಬಂಧ, ಹಿರಿಯ ಕಾಂಗ್ರೆಸ್ ನಾಯಕ ಮತ್ತು ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಪತ್ರ ಬರೆದಿರುವುದಾಗಿ ತಿಳಿಸಿದ್ದಾರೆ. ದಶಕಗಳಿಂದ ಮಹಿಳಾ ಮೀಸಲಾತಿ ಒಂದು ಭರವಸೆಯಾಗಿಯೇ ಉಳಿದಿದೆ. ಆದರೆ ಈಗ ಪ್ರಸ್ತುತ ಕೇಂದ್ರ ಸರ್ಕಾರ ಅದನ್ನು ವಾಸ್ತವಕ್ಕೆ ತರುತ್ತಿದೆ. ೨೦೨೯ ರ ಮೊದಲು ರಾಷ್ಟ್ರದ ನಾರಿ ಶಕ್ತಿಗೆ ಸರಿಯಾದ ಪ್ರಾತಿನಿಧ್ಯ ಸಿಗುವುದನ್ನು ಖಚಿತಪಡಿಸಿಕೊಳ್ಳಲು ಸಂಬಂಧಿಸಿದ ಅಗತ್ಯ ತಿದ್ದುಪಡಿಗಳು ನಿರ್ಣಾಯಕವಾಗಿವೆ ಎಂದು ಅವರು ಹೇಳಿದ್ದಾರೆ. ಪ್ರಕ್ರಿಯೆಯ ಹೆಸರಿನಲ್ಲಿ ಅನುಷ್ಠಾನವನ್ನು ವಿಳಂಬ ಮಾಡುವುದು ಲಕ್ಷಾಂತರ ಮಹಿಳೆಯರಿಗೆ ನ್ಯಾಯ ವಿಳಂಬ ಮಾಡಿದಂತಾಗುತ್ತದೆ ಎಂದು ಅವರು ಅಭಿಪ್ರಾಯ ಪಟ್ಟಿದ್ದಾರೆ.

<><><><>

ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಯುಎಇಗೆ ಕೈಗೊಂಡಿದ್ದ ಎರಡು ದಿನಗಳ ಅಧಿಕೃತ ಪ್ರವಾಸವನ್ನು ಮುಕ್ತಾಯಗೊಳಿಸಿದ್ದಾರೆ. ಈ ವೇಳೆ ಅವರು, ಯುಎಇ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೇದ್ ಅಲ್ ನಹ್ಯಾನ್ ಅವರನ್ನು ಭೇಟಿ ಮಾಡಿ ಪ್ರಧಾನಿ ನರೇಂದ್ರ ಮೋದಿ ಅವರ ಸಂದೇಶವನ್ನು ತಿಳಿಸಿದ್ದಾರೆ. ಇದೇ ವೇಳೆ ಉಭಯ ನಾಯಕರು ಇಂಧನ ಸಹಕಾರ ಬಲವರ್ಧನೆ, ವ್ಯಾಪಾರ ವಿಸ್ತರಣೆ ಹಾಗೂ ಉಭಯ ದೇಶಗಳ ನಡುವಿನ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಮುನ್ನಡೆಸುವ ಬಗ್ಗೆ ಚರ್ಚೆ ನಡೆಸಿದ್ದಾರೆ. ಇದಕ್ಕೂ ಮೊದಲು ಜೈಶಂಕರ್ ಯುಎಇಯಲ್ಲಿರುವ ಭಾರತೀಯ ಸಮುದಾಯ ಸದಸ್ಯರೊಂದಿಗೆ ಸಂವಾದ ನಡೆಸಿದರು.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದಿನಿಂದ ನಾಲ್ಕು ದಿನಗಳ ಗುಜರಾತ್ ಮತ್ತು ಮಹಾರಾಷ್ಟ್ರ ಪ್ರವಾಸ ಕೈಗೊಳ್ಳಲಿದ್ದಾರೆ. ರಾಜ್‌ಕೋಟ್‌ನ ಏಮ್ಸ್‌ನ ಮೊದಲ ಘಟಿಕೋತ್ಸವ ಸಮಾರಂಭದಲ್ಲಿಂದು ಅವರು ಭಾಗವಹಿಸಲಿದ್ದಾರೆ. ನಾಳೆ, ಡಾ.ಬಿ.ಆರ್.ಅಂಬೇಡ್ಕರ್ ಅವರ ಜನ್ಮ ದಿನಾಚರಣೆಯ ಸಂದರ್ಭದಲ್ಲಿ, ಗಾಂಧಿನಗರದ ಲೋಕ ಭವನದಲ್ಲಿ ನಡೆಯಲಿರುವ 'ಸಾಮಾಜಿಕ ಸಂರಸ್ಥ ಮಹೋತ್ಸವ'ದಲ್ಲಿ ರಾಷ್ಟ್ರಪತಿ ಪಾಲ್ಗೊಳ್ಳಲಿದ್ದಾರೆ. ಬಳಿಕ ಅವರು, ಗಾಂಧಿನಗರದಲ್ಲಿರುವ ರಾಷ್ಟ್ರೀಯ ರಕ್ಷಾ ವಿಶ್ವವಿದ್ಯಾಲಯದ ಐದನೇ ಘಟಿಕೋತ್ಸವ ಸಮಾರಂಭದಲ್ಲೂ ಪಾಲ್ಗೊಳ್ಳಲಿದ್ದಾರೆ.

<><><><>

ಹಣಕಾಸು ಸಚಿವಾಲಯದ ವೆಚ್ಚ ಇಲಾಖೆಯ ಕಾರ್ಯದರ್ಶಿ ಎಲ್ಲ ರಾಜ್ಯಗಳ ಮುಖ್ಯ ಕಾರ್ಯದರ್ಶಿಗಳಿಗೆ ದ್ವಿದಳ ದಾನ್ಯಗಳು ಮತ್ತು ಎಣ್ಣೆ ಬೀಜಗಳು, ರಾಗಿ ಬೆಳೆಗಳನ್ನು ಉತ್ತೇಜಿಸಲು ಬರೆದ ಪತ್ರವು ರಾಜ್ಯಗಳಿಗೆ ನೀಡಿದ ಸಲಹೆಯಾಗಿದೆಯೇ ಹೊರತು ನಿರ್ದೇಶನವಲ್ಲ ಎಂದು ಹಣಕಾಸು ಸಚಿವೆ

ನಿರ್ಮಲಾ ಸೀತಾರಾಮನ್ ಸ್ಪಷ್ಟಪಡಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ರಾಜ್ಯಗಳಿಗೆ ನೀಡಿದ ಸಲಹೆಯು ಭಾರತದ ದೀರ್ಘಕಾಲೀನ ಆಹಾರ ಮತ್ತು ಬೆಳೆ ಭದ್ರತೆಯನ್ನು ಬಲಪಡಿಸುವ ಗುರಿ ಹೊಂದಿರುವ ರಚನಾತ್ಮಕ ಮತ್ತು ಸಕರಾತ್ಮಕ ವಿಧಾನವನ್ನು ಪ್ರತಿಬಿಂಬಿಸುತ್ತದೆ ಎಂದು ತಿಳಿಸಿದ್ದಾರೆ.

<><><>

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹಾರ್ಮುಜ್ ಜಲಸಂಧಿ ನಿಯಂತ್ರಣಕ್ಕೆ ಆದೇಶಿಸಿದ ಬಳಿಕ ಇಂದು ಅಮೆರಿಕ ಮಿಲಿಟರಿ ಪಡೆ ಇರಾನ್‌ನ ಬಂದರುಗಳ ಮೇಲಿನ ಕಡಲ ದಿಗ್ಬಂಧನ ಆರಂಭಿಸಲಿದೆ. ಅಮೆರಿಕದ ಸೆಂಟ್ರಲ್ ಕಮಾಂಡ್ ಪ್ರಕಾರ ಇರಾನ್‌ನ ಬಂದರುಗಳು ಮತ್ತು ಕರಾವಳಿ ಪ್ರದೇಶಗಳ ಒಳಗೆ ಮತ್ತು ಹೊರಗೆ ತೆರಳುವ ಎಲ್ಲಾ ಹಡಗುಗಳಿಗೆ ಈ ದಿಗ್ಬಂಧನ ಅನ್ವಯಿಸಲಿದೆ. ಇರಾನಿಯೇತರ ಬಂದರುಗಳಿಗೆ ಹಾದುಹೋಗುವ ಹಡಗುಗಳಿಗೆ ಹಾರ್ಮುಜ್ ಜಲಸಂಧಿಯ ಮೂಲಕ ಅವಕಾಶಗಳನ್ನು ನೀಡಲು ನಿರ್ಧರಿಸಲಾಗಿದೆ. ಓಮನ್ ಕೊಲ್ಲಿಯಲ್ಲಿ ಮತ್ತು ಹಾರ್ಮುಜ್ ಜಲಸಂಧಿಗೆ ಸಮೀಪಿಸುವಾಗ ಅಮೆರಿಕ ನೌಕಾಪಡೆಗಳೊಂದಿಗೆ ಸಂವಹನ ನಡೆಸುವಂತೆ ಎಲ್ಲ ನಾವಿಕರಿಗೆ ಸೂಚಿಸಲಾಗಿದೆ. ಇದಕ್ಕೆ ಪ್ರತಿಕ್ರಿಯೆಯಾಗಿ ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಅಮೆರಿಕ ಅಥವಾ ಅದರ ಮಿತ್ರ ರಾಷ್ಟ್ರಗಳಿಂದ ಯಾವದೇ ದಾಳಿಯನ್ನು ಎದುರಿಸಬೇಕಾಗಬಹುದು ಎಂದು ಎಚ್ಚರಿಕೆ ನೀಡಿದೆ.

<><><>

ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಉನ್ನತ ಮಿಲಿಟರಿ ನಾಯಕರೊಂದಿಗೆ ದಕ್ಷಿಣ ಲೆಬನಾನ್‌ಗೆ ಭೇಟಿ ನೀಡಿದ್ದಾರೆ. ರಕ್ಷಣಾ ಸಚಿವ ಇಸ್ರೇಲ್ ಕಾಡ್ಜ್, ಐಡಿಎಫ್ ಮುಖ್ಯಸ್ಥ ಲೆಫ್ಟಿನೆಂಟ್ ಜನರಲ್ ಇಯಾಲ್ ಜಮೀರ್ ಮತ್ತು ಉತ್ತರ ಕಮಾಂಡ್ ಮುಖ್ಯಸ್ಥ ಮೇಜರ್ ಜನರಲ್ ರಫಿ ಮಿಲೊ ಅವರೊಂದಿಗೆ ಭೇಟಿ ನೀಡಿದ್ದ ನೆತನ್ಯಾಹು, ಗಡಿ ಪ್ರದೇಶಗಳಲ್ಲಿ ಪರಿಶೀಲನೆ ನಡೆಸಿದ್ದಾರೆ. ಇದೇ ವೇಳೆ ಲೆಬನಾನ್‌ನಲ್ಲಿ ಅವರು, ಭದ್ರತಾ ವಲಯವನ್ನು ರಚಿಸಿದ್ದು, ಇದು ಗಡಿಯಾಚೆಗಿನ ದಾಳಿಗಳನ್ನು ತಡೆಯಲು ಹಾಗೂ ರಾಕೆಟ್ ದಾಳಿಯಂತಹ ಬೆದರಿಕೆಗಳನ್ನು ಕಡಿಮೆಮಾಡಲು ಸಹಾಯಕವಾಗಿದೆ ಎಂದು ತಿಳಿಸಿದ್ದಾರೆ.

<><><>

ಸಂಗೀತ ಕ್ಷೇತ್ರದ ದಂತಕತೆ ಆಶಾ ಭೋಸ್ಲೆ ಅವರ ಅಂತ್ಯಕ್ರಿಯೆ ಇಂದು ಸಂಜೆ ೪ ಗಂಟೆಗೆ ಮುಂಬೈನ ಶಿವಾಜಿ ಪಾರ್ಕ್‌ನಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಲಿದೆ. ಮುಂಬೈ ಆಸ್ಪತ್ರೆಯಲ್ಲಿ ನಿನ್ನೆ ಅವರು ತಮ್ಮ ೯೨ ನೇ ವಯಸ್ಸಿನಲ್ಲಿ ನಿಧನರಾದರು. ಎದೆ ಸೋಂಕು ಮತ್ತು ಬಳಲಿಕೆಯಿಂದಾಗಿ, ಆಶಾ ಭೋಸ್ಲೆ ಅವರನ್ನು ಕಳೆದ ಶನಿವಾರ ಸಂಜೆ ಬ್ರೀಚ್ ಕ್ಯಾಂಡಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆಶಾ ಭೋಸ್ಲೆ ಅವರು ಪದ್ಮವಿಭೂಷಣ ಮತ್ತು ಮಹಾರಾಷ್ಟ್ರ ಭೂಷಣ ಪ್ರಶಸ್ತಿಗಳಿಗೆ ಭಾಜನರಾಗಿದ್ದರು. ಆಶಾ ಅವರು ವಾಸಿಸುತ್ತಿದ್ದ ಲೋವರ್ ಪರೇಲ್‌ನ ಕಾಸಾ ಗ್ರಾಂಡೆಯಲ್ಲಿ ಇಂದು ಬೆಳಿಗ್ಗೆ ೧೧ ಗಂಟೆಗೆ  ಸಾರ್ವಜನಿಕರಿಗೆ ಅಂತಿಮ ನಮನ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

<><><>

ಅಸ್ಸಾಂನ ಸಿಲ್ಚಾರ್ ಮತ್ತು ಕ್ಯಾಚಾರ್ ಜಿಲ್ಲೆಗಳು ನೈಸರ್ಗಿಕ ವಿಕೋಪಕ್ಕೆ ತುತ್ತಾಗಿವೆ. ಇರೊಂಗ್ಮಾರಾದಲ್ಲಿ ಸುಮಾರು ೪.೩ ತೀವ್ರತೆಯ ಭೂಕಂಪ ಸಂಭವಿಸಿದೆ. ಭೂಕಂಪ ಕಂಪನದ ಕೆಲವೇ ಗಂಟೆಗಳಲ್ಲಿ, ಮಧ್ಯಾಹ್ನ ೧ ಗಂಟೆಗೆ ಬರಾಕ್ ಕಣಿವೆಯಲ್ಲಿ ಪ್ರಬಲ ಚಂಡಮಾರುತ ಅಪ್ಪಳಿಸಿದೆ. ಚಂಡಮಾರುತದ ಬಿರುಸಿನ ಗಾಳಿ, ಭಾರೀ ಮಳೆ ಮತ್ತು ಆಲಿಕಲ್ಲು ಮಳೆಯಿಂದ ಎರಡೂ ಜಿಲ್ಲೆಗಳಲ್ಲಿ ವ್ಯಾಪಕ ಹಾನಿಯನ್ನುಂಟುಮಾಡಿದೆ.

<><><>

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಕ್ರಿಕೆಟ್‌ನ ಲೀಗ್ ಹಂತದ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಮುಂಬೈ ಇಂಡಿಯನ್ಸ್ ತಂಡವನ್ನು ೧೮ ರನ್‌ಗಳಿಂದ ಸೋಲಿಸಿದೆ.  ಆರ್‌ಸಿಬಿ ನೀಡಿದ್ದ ೨೪೧ ರನ್‌ಗಳ ಬೃಹತ್ ಗೆಲುವಿನ ಗುರಿ ಬೆನ್ನಟ್ಟಿದ ಮುಂಬೈ ತಂಡ ನಿಗದಿತ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೨೨೨ ರನ್ ಗಳಿಸಲಷ್ಟೇ ಶಕ್ತವಾಗಿ ಸೋಲೊಪ್ಪಿಕೊಂಡಿತು. ಮುಂಬೈ ಪರ, ಶೆರ್ಫೇನ್ ರುದರ್ಫೋರ್ಡ್ ಅವರ ಕೇವಲ ೩೧ ಎಸೆತಗಳಲ್ಲಿ ೭೧ ರನ್‌ಗಳ ಅಜೇಯ ಇನ್ನಿಂಗ್ಸ್ ವ್ಯರ್ಥವಾಯಿತು.  ಆರ್‌ಸಿಬಿ ಪರ, ಸುಯಾಶ್ ಶರ್ಮಾ ೨ ವಿಕೆಟ್ ಪಡೆದರು. ಇದಕ್ಕೂ  ಮುನ್ನ ಟಾಸ್ ಸೋತು  ಮೊದಲು ಬ್ಯಾಟ್ ಮಾಡಿದ ಆರ್‌ಸಿಬಿ ನಿಗದಿತ ೨೦ ಓವರ್‌ಗಳಲ್ಲಿ ೪ ವಿಕೆಟ್‌ಗಳಿಗೆ ೨೪೦ ರನ್ ಗಳಿಸಿತು. ಆರಂಭಿಕ ಬ್ಯಾಟ್ಸ್‌ಮನ್ ಫಿಲಿಪ್ ಸಾಲ್ಟ್ ಅತ್ಯಧಿಕ ೭೮ ರನ್ ಗಳಿಸಿದರೆ, ವಿರಾಟ್ ಕೊಹ್ಲಿ ಮತ್ತು ನಾಯಕ ರಜತ್ ಪಾಟಿದಾರ್ ಅರ್ಧಶತಕಗಳನ್ನು ಪೂರೈಸಿದರು. ಫಿಲಿಪ್ ಸಾಲ್ಟ್ ಪಂದ್ಯಶ್ರೇಷ್ಠ  ಪ್ರಶಸ್ತಿಗೆ ಭಾಜನರಾದರು. ಹೈದರಾಬಾದ್‌ನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿಂದು ಸನ್‌ರೈಸರ್ಸ್ ಹೈದರಾಬಾದ್ ತಂಡ, ರಾಜಸ್ಥಾನ ರಾಯಲ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ಸಂಜೆ ೭:೩೦ ಕ್ಕೆ ಪ್ರಾರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>